# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 669 |
| ಉತ್ತರಿಸಬೇಕಾದ ದಿನಾಂಕ | : | 23.12.2022 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ನಗರದಲ್ಲಿರುವ ವಸತಿ ಶಾಲೆಯ ನೂತನ ಕಟ್ಟಡದ ಕಾಮಗಾರಿಯು ಮುಕ್ತಾಯವಾಗುವುದು ಯಾವಾಗ ಮತ್ತು ಅದರಲ್ಲಿರುವ ಮಕ್ಕಳನ್ನು ಸ್ಥಳಾಂತರ ಮಾಡುವುದು ಯಾವಾಗ; | 2019-20ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-208 ರಲ್ಲಿ "ಯಾದಗಿರಿ, ಬಳ್ಳಾರಿ, ಚಿಕ್ಕಬಳ್ಳಾಪುರ, ಬೀದರ್ ಹಾಗೂ ಮಡಿಕೇರಿಯಲ್ಲಿ ಹೊಸ ಕ್ರೀಡಾ ವಸತಿ ನಿಲಯಗಳ ನಿರ್ಮಾಣಕ್ಕಾಗಿ ರೂ 12.50 ಕೋಟಿಗಳನ್ನು" ಒದಗಿಸಿರುವುದಾಗಿ ಘೋಷಿಸಲಾಗಿತ್ತು.<br><br>ಅದರಂತೆ, ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ಕ್ರೀಡಾ ವಸತಿ ನಿಲಯವನ್ನು ರೂ 250.00 ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಸರ್ಕಾರಿ ಆದೇಶ ಸಂಖ್ಯೆ: ವೈಎಸ್ ಡಿ/ಇಪಿಇ/36/2019 ಬೆಂಗಳೂರು, ದಿನಾಂಕ 06-01-2020 ರಲ್ಲಿ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿರುತ್ತದೆ.<br><br>ಆದರೆ, 2019-20ನೇ ಸಾಲಿನಲ್ಲಿ ಈ ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿ, ಆರ್ಥಿಕ ಇಲಾಖೆಯು ಮೀಸಲಿಟ್ಟ ಅನುದಾನವನ್ನು ಹಿಂಪಡೆದಿದ್ದರಿಂದ, ಈ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗಿರುವುದಿಲ್ಲ.<br><br>ಮುಂದುವರೆದು, ಸರ್ಕಾರಿ ಆದೇಶ ಸಂ:ವೈಎಸ್‌ಡಿ/ಇಪಿಇ/36/2019, ಬೆಂಗಳೂರು, ದಿನಾಂಕ: 26-10- 2021 ರಲ್ಲಿ, ಯಾದಗಿರಿ, ಬಳ್ಳಾರಿ, ಚಿಕ್ಕಬಳ್ಳಾಪುರ, ಬೀದರ್ ಹಾಗೂ ಮಡಿಕೇರಿಯಲ್ಲಿ ಹೊಸ ಕ್ರೀಡಾ ವಸತಿ ನಿಲಯಗಳ ನಿರ್ಮಾಣಕ್ಕಾಗಿ ಅನುದಾನ ಒದಗಿಸುವ ಘೋಷಣೆಯ ಪೈಕಿ 1/3 ನೇ ಭಾಗದಷ್ಟು ಅಂದರೆ ರೂ.416.66 ಲಕ್ಷಗಳನ್ನು 2021-22 ನೇ ಸಾಲಿನ ಪೂರಕ ಅಂದಾಜು-1 ರಲ್ಲಿ ಬಿಡುಗಡೆ ಮಾಡಿ ಆದೇಶ ಹೊರಡಿಸಿರುತ್ತದೆ. ಸದರಿ ಅನುದಾನದಲ್ಲಿ ಯಾದಗಿರಿ ಮತ್ತು ಮಡಿಕೇರಿಯಲ್ಲಿ ಹೊಸ ವಸತಿ ನಿಲಯ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿತ್ತು. ಆದರೆ, ಬೀದರ್ ಜಿಲ್ಲೆಯಲ್ಲಿ ಸದರಿ ಕಾಮಗಾರಿಯನ್ನು ಕೈಗೊಳ್ಳಲು ಅನುದಾನ ಕೊರತೆ ಉಂಟಾದ ಹಿನ್ನೆಲೆಯಲ್ಲಿ ಅನುಷ್ಠಾನಗೊಳಿಸಲು ಸಾಧ್ಯವಾಗಿರುವುದಿಲ್ಲ.<br><br>ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸಿ ಪೂರ್ಣಗೊಳಿಸಲು ಅವಶ್ಯಕವಿರುವ ಹೆಚ್ಚುವರಿ ಅನುದಾನ ಕೋರಿರುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.<br><br>ಪ್ರಸ್ತುತ ಕ್ರೀಡಾ ವಸತಿ ನಿಲಯದಲ್ಲಿರುವ ಕ್ರೀಡಾಪಟುಗಳಿಗೆ ಒಳಾಂಗಣ ಕ್ರೀಡಾಂಗಣದಲ್ಲಿ ವಸತಿ ಸೌಕರ್ಯ ಕಲ್ಪಿಸಲಾಗಿದೆ. |

| | | |
|---|---|---|
| ಆ) | ಈ ವಸತಿ ಶಾಲೆಗೆ ಆಹಾರ ಸರಬರಾಜು ಮಾಡಲು ಟೆಂಡರ್ ಒಂದು ವರ್ಷದಿಂದ ಆಗದೆ ಇದ್ದು, ಮಕ್ಕಳು ಖಾನಾವಳಿಯಲ್ಲಿ ಅಪೌಷ್ಠಿಕ ಆಹಾರ ಸೇವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು; | ಬೀದರ್ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳಿಗೆ ಇಲಾಖೆ ನಿಗಧಿಪಡಿಸಿರುವ ಆಹಾರ ಪಟ್ಟಿಯನ್ವಯ ಊಟೋಪಹಾರ ಸರಬರಾಜು ಮಾಡಲು ಜುಲೈ-2022 ರ ಕೊನೆಯ ವಾರದಲ್ಲಿ ಟೆಂಡರ್ ಆಹ್ವಾನಿಸಲಾಗಿದ್ದು, ತಾಂತ್ರಿಕ ಮತ್ತು ಆರ್ಥಿಕ ಬಿಡ್ ನ್ನು ಆಗಸ್ಟ್ ಮೂರನೇ ವಾರದಲ್ಲಿ ತೆರೆಯಲಾಗಿರುತ್ತದೆ. ಸದರಿ ಟೆಂಡರ್ ನಲ್ಲಿ ಕಡಿಮೆ ದರ ನಮೂದಿಸಿರುವ ಬಿಡ್ ದಾರರಿಗೆ ಕಾರ್ಯಾದೇಶ ನೀಡುವ ಬಗ್ಗೆ ಕ್ರಮವಹಿಸಲಾಗುತ್ತಿದೆ. ಟೆಂಡರ್ ಪ್ರಕ್ರಿಯೆ ಅಂತಿಮಗೊಳ್ಳುವವರೆಗೆ ಕೆ.ಟಿ.ಪಿ.ಪಿ. ನಿಯಮಾನುಸಾರ ಸ್ಪರ್ಧಾತ್ಮಕ ದರಪಟ್ಟಿಗಳ ಆಧಾರದ ಮೇಲೆ ಇಲಾಖೆ ನಿಗಧಿಪಡಿಸಿರುವ ಮೆನುಪಟ್ಟಿಯನ್ವಯ ಊಟೋಪಹಾರ ಒದಗಿಸಲು ಸೂಚಿಸಲಾಗಿದೆ. |
| ಇ) | ಈ ವಸತಿ ಶಾಲೆಯ ಕಾಯಕಲ್ಪ ಮಾಡುವುದಾಗಿ ಸರ್ಕಾರ ಹಿಂದೆ ಭರವಸೆ ನೀಡಿದ್ದು, ಇಲ್ಲಿಯವರೆಗೆ ವಸತಿ ಶಾಲೆಯ ಯಾವುದೇ ಸುಧಾರಣೆ ಕಾರ್ಯ ನಡೆಯದಿರುವುದಕ್ಕೆ ಕಾರಣವೇನು? | ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅನುದಾನದ ಕೊರತೆ ಉಂಟಾಗಿರುವುದರಿಂದ, ಹೊಸದಾಗಿ ಕ್ರೀಡಾ ವಸತಿ ನಿಲಯ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದಿಲ್ಲ. |
| ಈ) | ಈ ರೀತಿ ಭರವಸೆ ನೀಡಿ ಕಾರ್ಯ ಆಗದಿರುವ ಕಾರಣ ಆ ವಸತಿ ಶಾಲೆಯ ಮಕ್ಕಳಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ; ಮಕ್ಕಳಿಗೆ ನ್ಯಾಯ ಒದಗಿಸುವ ಬಗ್ಗೆ ಸರ್ಕಾರದ ಕ್ರಮವೇನು? | ಉತ್ತಮ ವಸತಿ ಸೌಕರ್ಯ ಕಲ್ಪಿಸಿರುವುದರಿಂದ, ಕ್ರೀಡಾಪಟುಗಳಿಗೆ ಯಾವುದೇ ರೀತಿಯ ಅನ್ಯಾಯವಾಗಿರುವುದಿಲ್ಲ. |

ವೈಎಸ್‌ಡಿ-ಇಬಿಬಿ/183/2022

(ಡಾ. ನಾರಾಯಣಗೌಡ)
ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ
ಸಚಿವರು